ಬೆಂಗಳೂರು ನಗರ ವಿಶ್ವವಿದ್ಯಾಲಯ
BENGALURU CITY UNIVERSITY
BE BOUNDLESS

ಸೆಂಟ್ರಲ್ ಕಾಲೇಜು ಆವರಣ, ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು – 560 001.
Ph.No.080-22961016 / 22131385 E-Mail ID: registrarbcu@gmail.com

ಸಂಖ್ಯೆ: ಬೆ.ನ.ವಿ./ಕು.ಸ./ಸಂಯೋಜನಾ/2021-22

ದಿನಾಂಕ: 05-02-2022

## ಅಧಿಸೂಚನೆ

ವಿಷಯ: Abbas Khan College for Women,Durga Complex, OTC Road, Cubban Pet, Bangalore-560 002. ಕಾಲೇಜಿಗೆ 2021-22ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆಯನ್ನು ನವೀಕರಿಸುವ ಬಗೆಗೆ

ಉಲ್ಲೇಖ: 1. ಸರ್ಕಾರಿ ಆದೇಶ ಸಂಖ್ಯೆ: ಇಡಿ 227 ಯುಎನ್ಇ 2021 ದಿನಾಂಕ: 16.09.2021.

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 05.02.2022

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಸೂಚಿಸಿದ ಅಂಕ ಹಾಗೂ ಮಾನದಂಡಗಳ ಅನ್ವಯ ಮತ್ತು ರಾಜ್ಯ ಸರ್ಕಾರ ಅನುಷ್ಠಾನಗೊಳಿಸಿರುವ ರಾಷ್ಟ್ರೀಯ ಶಿಕ್ಷಣ ನೀತಿ (NEP) 2020ರ ಪ್ರಕಾರ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ,2021-22ನೇ ಸಾಲಿಗೆ ಬೆಂಗಳೂರಿನ Abbas Khan College for Women,Durga Complex, OTC Road, Cubban Pet, Bangalore-560 002. ಕಾಲೇಜಿನ, ಈ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಅಧಿಸೂಚನೆಯಲ್ಲಿ ವಿಧಿಸಲಾದ ನಿಬಂಧನೆ/ಷರತ್ತುಗಳಿಗೆ ಒಳ ಪಟ್ಟು ಸಂಯೋಜನೆಯನ್ನು ನವೀಕರಿಸಿಸಲಾಗಿದೆ.

### 2021-22ನೇ ಶೈಕ್ಷಣಿಕ ಸಾಲಿಗೆ ಪ್ರಥಮ ವರ್ಷದ 1 ಮತ್ತು 2ನೇ ಸಮಿಸ್ಟರ್‌ಗಳು (ಎನ್.ಇ.ಪಿ ಪ್ರಕಾರ)

| ಕೋರ್ಸು | ಶಿಸ್ತಿನ /ಮೂಲ ವಿಷಯಗಳು (Discipline / Core Subject) | ಐಚ್ಛಿಕವಿಷಯವಾರು ಒಟ್ಟು ವಿದ್ಯಾರ್ಥಿ ಪ್ರಮಾಣ | ನೂ.ರಾ.ಶಿ.ನೀತಿ -2020 ರಂತೆ ನಿಗದಿಪಡಿಸಲಾದ ವಿದ್ಯಾರ್ಥಿ ಪ್ರಮಾಣ Discipline / Core Subject) (ಶೇ.70% ರಂತೆ ಕಲಾ ನಿಕಾಯ, ಶೇ.75% ರಂತೆ ವಿಜ್ಞಾನ ನಿಕಾಯದ ವಿಷಯಗಳಿಗೆ) | (Open Elective ) ಮುಕ್ತ ಆಯ್ಕೆಯ ವಿಷಯಕ್ಕೆ ನಿಗಧಿಪಡಿಸಲಾದ ಪ್ರಮಾಣ (ಶೇ.30% ರಂತೆ ಕಲಾ ನಿಕಾಯ, (ಶೇ.25% ರಂತೆ ವಿಜ್ಞಾನ |
|---|---|---|---|---|
| BACHELOR OF ARTS | | | | |
| | HISTORY | 100 | 70 | 30 |
| | ECONOMICS | 100 | 70 | 30 |
| | GEOGRAPHY | 50 | 35 | 15 |
| | SOCIOLOGY | 50 | 35 | 15 |
| BACHELOR OF COMMERCE | | | | |
| | GENERAL | 120 | 0 | 0 |
| BACHELOR OF COMPUTER APPLICATIONS | | | | |
| | GENERAL | 20 | 0 | 0 |
| BACHELOR OF SCIENCE | | | | |
| | COMPUTER SCIENCE | 30 | 23 | 8 |
| | CHEMISTRY | 60 | 45 | 15 |
| | HOME SCIENCE | 30 | 23 | 8 |
| | BOTANY | 60 | 45 | 15 |
| | ZOOLOGY | 30 | 23 | 8 |
| | PHYSICS | 30 | 23 | 8 |

| | | | | |
|---|---|---|---|---|
| | MATHEMATICS | 30 | 23 | 8 |

Renewal Affiliation

**2021–22ನೇ ಶೈಕ್ಷಣಿಕ ಸಾಲಿನ 3 ರಿಂದ 6ನೇ ಸೆಮಿಸ್ಟರ್‌ಗಳು (ನಾನ್‌–ಎನ್.ಇ.ಪಿ ಪ್ರಕಾರ)**

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| **BACHELOR OF ARTS** | | |
| | E-H-G ( ECONOMICS, HISTORY, GEOGRAPHY ) | 50 |
| | E-H-S ( ECONOMICS, HISTORY, SOCIOLOGY ) | 50 |
| **BACHELOR OF BUSINESS ADMINISTRATION** | | |
| | GENERAL | 30 |
| **BACHELOR OF COMMERCE** | | |
| | GENERAL | 120 |
| **BACHELOR OF COMPUTER APPLICATIONS** | | |
| | GENERAL | 20 |
| **BACHELOR OF SCIENCE** | | |
| | C-B-Z ( CHEMISTRY , BOTANY , ZOOLOGY ) | 30 |
| | C-H-B ( CHEMISTRY, HOMESCIENCE, BOTANY) | 30 |
| | ENG-S-PSY ( ENGLISH , SOCIOLOGY, PSYCHOLOGY ) | 30 |
| **MASTER OF ARTS** | | |
| | ECONOMICS | 20 |
| **Master of Commerce** | | |
| | General | 50 |

ಸೂಚನೆ:

1. ಸರ್ಕಾರದ ಅನುಮೋದನೆ ಮೇರೆಗೆ 2021–22ನೇ ಶೈಕ್ಷಣಿಕ ಸಾಲಿಗೆ ಸೀಮಿತವಾಗಿ ಪ್ರಸ್ತುತ ಕೋರ್ಸ್/ಕಾಂಬಿನೇಷನ್‌ವಾರು ಅನುಮೋದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ (**intake**) ಹೆಚ್ಚುವರಿಯಾಗಿ 20% ವಿದ್ಯಾರ್ಥಿಗಳ ಪ್ರವೇಶವನ್ನು ನಿಬಂಧನೆಗೆ ಒಳಪಟ್ಟು ಅನುಮತಿಸಲಾಗಿದೆ.
2. ಬಿ.ಎ. ಹಾಗೂ ಬಿ.ಎಸ್ಸಿ. 1ನೇ ವರ್ಷಕ್ಕೆ (ಪ್ರಥಮ ಹಾಗೂ ದ್ವಿತೀಯ ಸೆಮಿಸ್ಟರ್‌ಗಳಿಗೆ) ರಾಷ್ಟ್ರೀಯ ಶಿಕ್ಷಣ ನೀತಿ 2020 ರನ್ವಯ ಆಯಾಯ ಕೋರ್ಸುಗಳಲ್ಲಿ ಕಾಂಬಿನೇಷನ್‌ಗಳ ಬದಲಾಗಿ ವಿಷಯಗಳನ್ನು ಆಯ್ಕೆ ಮಾಡಿಕೊಳ್ಳುವ ಅವಕಾಶವಿರುತ್ತದೆ.

   ಅದರಂತೆ ಈ ಕೋರ್ಸುಗಳಿಗೆ ಕಾಲೇಜಿನ ಅನುಮೋದಿತ ಕಾಂಬಿನೇಷನ್‌ಗಳಲ್ಲಿ ಪ್ರತಿ ವಿಷಯದ ಒಟ್ಟು ವಿದ್ಯಾರ್ಥಿ ಪ್ರಮಾಣ (**intake**) ಪರಿಗಣಿಸಿ, ವಿದ್ಯಾರ್ಥಿ ಪ್ರಮಾಣವನ್ನು ನಿಗಧಿಪಡಿಸಲಾಗಿದೆ. ಮಹಾವಿದ್ಯಾಲಯ (ಈ ವರ್ಷಕ್ಕೆ ಮಾತ್ರ) ಸಾಧ್ಯವಾದ ಮಟ್ಟಿಗೆ ವಿಷಯವಾರು ಪ್ರವೇಶ ಮಿತಿಯನ್ನು ಸಮತೋಲನ ಕಾಯ್ದುಕೊಳ್ಳುವುದು.
3. **Open Elective**ಗೆ ಸಂಬಂಧಪಟ್ಟಂತೆ ಕಾಲೇಜಿನ ಒಟ್ಟು ಅನುಮೋದಿತ ವಿದ್ಯಾರ್ಥಿ ಪ್ರಮಾಣದ 50% ಮೀರದಂತೆ ಕ್ರಮವಹಿಸುವುದು.
4. ಸದರಿ ಸಂಯೋಜನಾ ಅಧಿಸೂಚನೆಯು ಸರ್ಕಾರ /ವಿಶ್ವವಿದ್ಯಾನಿಲಯ ಕಾಲಕಾಲಕ್ಕೆ ಹೊರಡಿಸುವ ತಿದ್ದುಪಡಿ ಷರತ್ತುಗಳಿಗೆ ಒಳಪಟ್ಟಿರುತ್ತದೆ.

---

ವಿ.ಸೂ: 2021–22ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಹಾಗೂ ನ್ಯೂನತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ ನೀಡತಕ್ಕದ್ದು, ಇಲ್ಲವಾದಲ್ಲಿ 2022–23ನೇ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ

---

ಷರತ್ತುಗಳು:

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾನಿಲಯ ಅಂಗೀಕಾರ ನೀಡುವುದಿಲ್ಲ.
3. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾನಿಲಯದ ಪೂರ್ವಾನುಮತಿಯಿಲ್ಲದೆ ವಿಭಾಗಗಳನ್ನು ಹೆಚ್ಚಿಸಬಾರದು.
4. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5. ವಿಶ್ವವಿದ್ಯಾನಿಲಯವು ಕಾಲೇಜಿನ ವಿದ್ಯಾರ್ಥಿಗಳು ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ

ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾನಿಲಯದ ಸಂಯೋಜನಾ ಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣ ಮೀರದಂತೆ ಹಾಗೂ ವಿಶ್ವವಿದ್ಯಾನಿಲಯವು ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.

6. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾನಿಲಯ ಕಾಲಕಾಲಕ್ಕೆ ನಿಗಧಿಪಡಿಸಿರುವ ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50 ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ100 ರಂತೆ) ವಿಶ್ವವಿದ್ಯಾನಿಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.

7. ವೈಶಾಕ v/s ರಾಜಸ್ಥಾನ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13.08.1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತ ಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ.ಯಾವುದೇ ವ್ಯಕ್ತಿ / ವಿದ್ಯಾರ್ಥಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿ ದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

8. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

9. ಕಾಲೇಜು, ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ. ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೆ ದಾಖಲೆಗಳನ್ನು ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾನಿಲಯಕ್ಕೆ ತಿಳಿಸತಕ್ಕದ್ದು.

10. ವಿದ್ಯಾರ್ಥಿಗಳು ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದ್ದಲ್ಲಿ, ಕಾಲೇಜು, ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರಿನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

11. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

12. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

13. 2022-23ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೇ ಅರ್ಜಿಯನ್ನು ಸಲ್ಲಿಸತಕ್ಕದ್ದು.

14. ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್ (NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.

15. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ಹಾಗೂ ಕಡ್ಡಾಯವಾಗಿ ಮೌಲ್ಯಮಾಪನ ಕಾರ್ಯಕ್ಕೆ ಕಳುಹಿಸತಕ್ಕದ್ದು, ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

16. ಸಂಯೋಜನೆ ನೀಡಲಾದ ಯಾವುದೇ ವಿಷಯ/ಕಾಂಬಿನೇಷನ್‌ಗಳಿಗೆ ಪ್ರವೇಶ ನೀಡುವ ಪೂರ್ವದಲ್ಲಿ ಆಯಾಯ ವಿಷಯಗಳ ಪಠ್ಯಕ್ರಮ ವಿಶ್ವವಿದ್ಯಾನಿಲಯದಲ್ಲಿ ಲಭ್ಯವಿರುವುದನ್ನು ಖಚಿತ ಪಡಿಸಿಕೊಳ್ಳತಕ್ಕದ್ದು.

17. ಸಂಯೋಜನಾ ಶುಲ್ಕದ ಮೇಲೆ GST ಅನ್ವಯವಾಗುವುದರಿಂದ 2018-19 ರಿಂದ 2021-22ನೇ ಸಾಲಿನ ಒಟ್ಟು 4 ವರ್ಷದ ಸಂಯೋಜನಾ ಶುಲ್ಕದ ಮೇಲೆ 18% GST ಮೊತವನ್ನು ಲೆಕ್ಕಹಾಕಿ ಪಾವತಿಸುವುದು.

ಆಜ್ಞೆ ಮೇರೆಗೆ

ಕುಲಸಚಿವರು

ಗೆ,

ಪ್ರಾಂಶುಪಾಲರು,

Abbas Khan College for Women,Durga Complex, OTC Road, Cubban Pet,
Bangalore-560 002.

ಪ್ರತಿಗಳು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು –560001
2. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು - 560001.
3. ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು 560001